## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯದಲ್ಲಿ ಪೋಲಿಸ್ ಇಲಾಖೆಯವರು ಸಂಚಾರಿ ಇ-ಚಲನ್ ಮೂಲಕ ವಿಧಿಸಿದ ದಂಡದ ಮೊತ್ತದಲ್ಲಿ ರಿಯಾಯಿತಿ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ ಟಿಡಿ 27 ಟಿಡಿಓ 2023, ದಿನಾಂಕ:02.02.2023.
2. ಸರ್ಕಾರದ ಆದೇಶ ಸಂಖ್ಯೆ ಟಿಡಿ 27 ಟಿಡಿಓ 2023, ದಿನಾಂಕ:03.03.2023.
3. ಸರ್ಕಾರದ ಆದೇಶ ಸಂಖ್ಯೆ ಟಿಡಿ 27 ಟಿಡಿಓ 2023, ದಿನಾಂಕ:05.07.2023.
4. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಪತ್ರ ಸಂಖ್ಯೆ:KSLA/04/NLA/2025, ದಿನಾಂಕ:26.06.2025.
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಪತ್ರ ಸಂಖ್ಯೆ:KSLA/09/NLA/2025, ದಿನಾಂಕ:12.08.2025.
6. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪ್ರಸ್ತಾವನೆ ಸಂಖ್ಯೆ: ಸಾಆ/ಪ್ರ-3/ ಪಿ.ಆರ್-29/2022-23, ದಿನಾಂಕ: 04.03.2025.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರ ಸರ್ಕಾರದ ಆದೇಶದಲ್ಲಿ, ದಿನಾಂಕ:11.02.2023ರ ಒಳಗಾಗಿ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಒಂದು ಬಾರಿಯ ಕ್ರಮವಾಗಿ (onetime measure) ಮಾತ್ರ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು ರಿಯಾಯಿತಿ ನೀಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಸರ್ಕಾರದ ಆದೇಶದಲ್ಲಿ, ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಿನಾಂಕ:11.02.2023ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ, ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಮತ್ತೊಂದು ಬಾರಿಗೆ ಶೇಕಡಾ 50 ರಷ್ಟು ರಿಯಾಯಿತಿ ನೀಡಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಸರ್ಕಾರದ ಆದೇಶದಲ್ಲಿ, ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಿನಾಂಕ:11.02.2023 ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ, ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಮತ್ತೊಂದು ಬಾರಿಗೆ ಶೇಕಡಾ 50 ರಷ್ಟು (ಐವತ್ತರಷ್ಟು ಮಾತ್ರ) ರಿಯಾಯಿತಿ ನೀಡಿ ಆದೇಶಿಸಲಾಗಿತ್ತು ಹಾಗೂ ಈ ರಿಯಾಯಿತಿಯು ದಿನಾಂಕ:09.09.2023ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದು ತಿಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ:(4) ಮತ್ತು (5)ರ ಪತ್ರಗಳಲ್ಲಿ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50%ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ದಿನಾಂಕ:05.07.2025 ರಿಂದ 11.07.2025ರವರೆಗೆ ಕಾಲಾವಕಾಶವನ್ನು ಕಲ್ಪಿಸಿ ಆದೇಶ ಹೊರಡಿಸುವಂತೆ ಕೋರಲಾಗಿರುತ್ತದೆ. ಮುಂದುವರೆದು ಸದರಿ ಅವಧಿಯು ಮುಕ್ತಾಯವಾಗಿರುವುದರಿಂದ ಸದರಿ ಕಾಲಾವಕಾಶವನ್ನು ದಿನಾಂಕ:23.08.2025 ರಿಂದ 12.09.2025ರವರೆಗೆ ಕಲ್ಪಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ಪ್ರಸ್ತಾವನೆಯಲ್ಲಿ, ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು ಇವರು ಪೊಲೀಸ್ ಇಲಾಖೆಯ ಸಂಚಾರಿ e-Challan ಗಳಲ್ಲಿ ಶೇ.50% ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಹಾಗೂ ಸಾರಿಗೆ ಇಲಾಖೆಯಲ್ಲಿ 2018-19ನೇ ಸಾಲಿನ ಪೂರ್ವದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ವಾಹನ ಮಾಲೀಕರುಗಳಿಂದ ಶೇ.50% ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಅವಕಾಶ ಕಲ್ಪಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಟಿಡಿ 27 ಟಿಡಿಓ 2023**
**ಬೆಂಗಳೂರು, ದಿನಾಂಕ:21.08.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ, ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು (ಐವತ್ತರಷ್ಟು ಮಾತ್ರ) ರಿಯಾಯಿತಿ ನೀಡಿ ಆದೇಶಿಸಿದೆ.

ಈ ರಿಯಾಯಿತಿಯು ದಿನಾಂಕ:23.08.2025 ರಿಂದ 12.09.2025ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಅನಧಿಕೃತ ಟಿಪ್ಪಣಿ ಸಂಖ್ಯೆ ಆಇ 52 ವೆಚ್ಚ-11 2023, ದಿನಾಂಕ:02.08.2025 ಮತ್ತು ದಿನಾಂಕ:16.08.2025 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Pushpa V.S.
(ಪುಷ್ಪ ವಿ. ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ,
BLP ಸಾರಿಗೆ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು ಆಡಿಟ್-2, ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು–560001.
2. ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಹಾಗೂ ಅರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
3. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಟಿ.ಟಿ.ಎಂ.ಸಿ. ಸಂಕೀರ್ಣ, 'ಎ' ಬ್ಲಾಕ್, 1ನೇ ಮಹಡಿ, ಶಾಂತಿನಗರ, ಬೆಂಗಳೂರು.
4. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ನ್ಯಾಯ ದೇಗುಲ, ಮೊದಲನೇ ಮಹಡಿ, ಹೆಚ್. ಸಿದ್ದಯ್ಯ ರಸ್ತೆ, ಬೆಂಗಳೂರು-27.

**ಪ್ರತಿ:-**

1. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿ, ಸಾರಿಗೆ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾಕಡತ / ಒ.ಡಿ.ಜಿ.ಸಿ.,